# Akashvani: Bangalore
## Regional Bulletin In Kannada
### ಆಕಾಶವಾಣಿ ಬೆಂಗಳೂರು
### ಪ್ರದೇಶ ಸಮಾಚಾರ

**11.02.2026** **14.30hrs**

*********

**ಮುಖ್ಯಾಂಶಗಳು :**

1. ಶಾಸಕರು, ಪರಿಷತ್ ಸದಸ್ಯರು ಸ್ವಂತ ಖರ್ಚಿನಲ್ಲಿ ವಿದೇಶ ಪ್ರವಾಸ; ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
2. ಎತ್ತಿನಹೊಳೆ ಯೋಜನೆಗೆ ಕೇಂದ್ರ ಸಚಿವ ಕುಮಾರಸ್ವಾಮಿ ಪರಿಸರ ಇಲಾಖೆಯಿಂದ ಅನುಮತಿ ಕೊಡಿಸುವಂತೆ ಉಪಮುಖ್ಯಮಂತ್ರಿ ಮನವಿ
3. ಬಂಡೀಪುರದಲ್ಲಿ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಶೃಂಗಸಭೆ ಮುಕ್ತಾಯ; ದೊಡ್ಡ ಬೆಕ್ಕುಗಳ ಸಂರಕ್ಷಣೆ ಕುರಿತಂತೆ ತಜ್ಞರಿಂದ ವಿಚಾರ ಮಂಡನೆ
4. ಬಿಜೆಪಿ ಶಾಸಕ ಭೈರತಿ ಬಸವರಾಜು ಶರಣಾಗುವುದು ಒಳಿತು - ಗೃಹ ಸಚಿವ ಡಾ. ಜಿ. ಪರಮೇಶ್ವರ್
5. ರಾಷ್ಟ್ರೀಯ ಹೆದ್ದಾರಿ ೪೮ರಲ್ಲಿ ಹೆಚ್ಚುತ್ತಿರುವ ಅಪಘಾತ ಹಿನ್ನೆಲೆ; ಪಥ ಶಿಸ್ತು ಪಾಲನೆ ಕಡ್ಡಾಯಗೊಳಿಸಿದ ದಾವಣಗೆರೆ ಜಿಲ್ಲಾಡಳಿತ

***********

ವಿವಿಧ ಇಲಾಖೆಗಳೊಂದಿಗೆ ಸಭೆಗಳನ್ನು ನಡೆಸಲಾಗುತ್ತಿದ್ದು, ಆಯವ್ಯಯದ ದಿನಾಂಕವನ್ನು ಶೀಘ್ರವೇ ಪ್ರಕಟಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಸಕರು ಹಾಗೂ ಪರಿಷತ್ ಸದಸ್ಯರು ತಮ್ಮ ಸ್ವಂತ ಖರ್ಚಿನಲ್ಲಿ ವಿದೇಶಿ ಪ್ರವಾಸ ಕೈಗೊಳ್ಳುತ್ತಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ನಾಯಕತ್ವ ಬದಲಾವಣೆ ಕುರಿತಂತೆ ಪ್ರತಿಕ್ರಿಯಿಸಿ, ನಾಯಕತ್ವ ಬದಲಾವಣೆ ಬಗ್ಗೆ ವರಿಷ್ಠರು ತೀರ್ಮಾನಿಸಿದರೆ ತಾವು ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಬ್ಬರು ಬದ್ಧವಾಗಿರುವುದಾಗಿ ಹೇಳಿದ್ದಾರೆ.

***** ಧ್ವನಿ**** ಮುಖ್ಯಮಂತ್ರಿ

***********

ಎತ್ತಿಹೊಳೆ ಯೋಜನೆಗೆ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಪರಿಸರ ಇಲಾಖೆಯಿಂದ ಅನುಮತಿ ಕೊಡಿಸಲಿ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಪ್ರಯತ್ನ ಮುಂದುವರಿಸುವುದಾಗಿ ಸ್ಪಷ್ಟಪಡಿಸಿದ್ದಾರೆ. ಬಯಲುಸೀಮೆಯ ಕೆರೆಗಳನ್ನು ತುಂಬಿಸಿ, ಅಂತರ್ಜಲ ಹೆಚ್ಚಿಸಲು ಕಾರ್ಯ ನಿರ್ವಹಿಸುವುದಾಗಿ ಹೇಳಿದ್ದಾರೆ. ಇದೇ ವೇಳೆ ರಾಜ್ಯದ ನೀರಾವರಿ ಯೋಜನೆಗಳ ಬಗ್ಗೆ ಕಾನೂನು ತಜ್ಞರೊಂದಿಗೆ ಇಂದು ಚರ್ಚೆ ನಡೆಸುವುದಾಗಿ ಸ್ಪಷ್ಟಪಡಿಸಿದ್ದಾರೆ. ಸುಪ್ರೀಂಕೋರ್ಟ್ ನೀಡಿದ ತೀರ್ಪಿನಿಂದ ಸುಮಾರು ಒಂದು ಲಕ್ಷ ಕೋಟಿ ರೂಪಾಯಿ ಹಣ ಉಳಿತಾಯವಾಗಿದೆ ಎಂದು ತಿಳಿಸಿದ್ದಾರೆ.

***********

ಭಾರತ ಸರ್ಕಾರದ ತಾಂತ್ರಿಕ ಮತ್ತು ಆರ್ಥಿಕ ಸಹಕಾರ ಯೋಜನೆಯಡಿ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರದಲ್ಲಿ ಆಯೋಜಿಸಿದ್ದ ೩ ದಿನಗಳ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಅಲೆಯನ್ಸ್ ಶೃಂಗಸಭೆ ಇಂದು ಮುಕ್ತಾಯಗೊಂಡಿದೆ. ದೊಡ್ಡ ಬೆಕ್ಕುಗಳ ಸಂರಕ್ಷಣೆಗೆ ಮಾರ್ಗಸೂಚಿಗಳು, ಕಾಡಾನೆ ಮತ್ತು ಮಾನವ ಸಂಘರ್ಷ ನಿರ್ವಹಣೆ, ದೊಡ್ಡ ಬೆಕ್ಕು ಪ್ರಬೇಧ ಹಾಗೂ ಅರಣ್ಯ ಸಂರಕ್ಷಣೆಯಲ್ಲಿ ಸಮುದಾಯದ ಪಾತ್ರ , ಪರಿಸರ ವ್ಯವಸ್ಥೆಯ ಪುನಃಸ್ಥಾಪನೆ ಮತ್ತು ಆವಾಸಸ್ಥಾನ ನಿರ್ವಹಣೆ, ವನ್ಯಜೀವಿ ಸಂರಕ್ಷಣೆಗೆ ಕಾನೂನುಗಳು ವಿಷಯಗಳ ಬಗ್ಗೆ ಹಿರಿಯ ಅರಣ್ಯಾಧಿಕಾರಿಗಳು ಮತ್ತು ವನ್ಯಜೀವಿ ತಜ್ಞರು ವಿಚಾರ ಮಂಡಿಸಿದ್ದಾರೆ. ಶೃಂಗಸಭೆಯಲ್ಲಿ ಭಾಗಿಯಾಗಿದ್ದ ೧೨ ದೇಶಗಳ ೩೯ ಪ್ರತಿನಿಧಿಗಳು ಬಂಡೀಪುರ

ಹುಲಿ ಸಂರಕ್ಷಿತ ಪ್ರದೇಶದ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಬೇಟೆ-ವಿರೋಧಿ ಶಿಬಿರಗಳು, ರಕ್ಷಣಾ ತಂತ್ರಗಳು, ನೀರಿನ ತೊಟ್ಟಿಗಳು, ಸೌರ-ಚಾಲಿತ ಬೋರ್ ವೆಲ್ ಗಳು, ಕಳೆಗಿಡ ಲಂಟಾನಾ ತೆರವುಗೊಳಿಸಿ ಹುಲ್ಲುಗಾವಲು ಪುನರ್ ಸ್ಥಾಪನೆಯ ಸ್ಥಳಗಳನ್ನು ವೀಕ್ಷಿಸಿ ಅರಣ್ಯ ಇಲಾಖೆ ಸಿಬ್ಬಂದಿ ಜೊತೆ ಸಂವಾದ ನಡೆಸಿದರು.

***********

ರೌಡಿ ಶೀಟರ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಶಾಸಕ ಭೈರತಿ ಬಸವರಾಜು ಪೊಲೀಸರ ಮುಂದೆ ಶರಣಾಗುವುದು ಒಳಿತು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಯಂಪ್ರೇರಣೆಯಿಂದ ಶರಣಾಗದಿದ್ದರೆ ಪೊಲೀಸರೇ ಅವರನ್ನು ಬಂಧಿಸುವುದು ಅನಿವಾರ್ಯ ಎಂದು ಹೇಳಿದ್ದಾರೆ. ಭೈರತಿ ಬಸವರಾಜು ಅವರ ಮಧ್ಯಂತರ ಜಾಮೀನು ಅರ್ಜಿಯನ್ನು ಉಚ್ಛ ನ್ಯಾಯಾಲಯ ನಿನ್ನೆ ರದ್ದುಗೊಳಿಸಿತ್ತು.

***********

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಕ್ತಿಭವನದಲ್ಲಿಂದು ೨೦೨೬-೨೭ನೇ ಸಾಲಿನ ಆಯವ್ಯಯ ಕುರಿತಂತೆ ಪೂರ್ವಭಾವಿ ಚರ್ಚೆ ನಡೆಸುತ್ತಿದ್ದಾರೆ. ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಅಧಿಕಾರಿಗಳೊಂದಿಗೆ ಇಂದು ಸಭೆ ನಡೆಸಿದರು. ಬಳಿಕ ಅವರು ಸಕ್ಕರೆ, ಜವಳಿ, ಕೃಷಿ ಮಾರುಕಟ್ಟೆ, ಕೃಷಿ, ಸಹಕಾರ, ಸಾರಿಗೆ, ಮುಜರಾಯಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಗಳೊಂದಿಗೂ ಅವರು ಸಮಾಲೋಚನೆ ನಡೆಸಲಿದ್ದಾರೆ.

***********

ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಆಟೋಮೋಟಿವ್ ರಿಸರ್ಚ್ ಆಸೋಸಿಯೇಷನ್ ಆಫ್ ಇಂಡಿಯಾ ಸಂಶೋಧನಾ ಕೇಂದ್ರ ತೆರೆಯಲು ೧೦೫ ಎಕರೆ ಭೂಮಿ ನೀಡಲು ರಾಜ್ಯ ಸರ್ಕಾರ ಸಿದ್ಧ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಸಚಿವ ಎಂ.ಬಿ. ಪಾಟೀಲ್ ನಿರ್ಧಾರವನ್ನು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಶ್ಲಾಘಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಉದ್ದೇಶಿತ ಯೋಜನೆ ಜಾರಿ ಮಾಡಲು ನೂರು ಎಕರೆ ಭೂಮಿ ಅಗತ್ಯವಿದ್ದು, ಅದಷ್ಟು ಬೇಗ ಭೂಮಿ ಮಂಜೂರು ಮಾಡುವಂತೆ ಮನವಿ ಮಾಡಿದ್ದರು. ಇನ್ನಾದರೂ ಕುಮಾರಸ್ವಾಮಿ ಅವರು, ಕೇಂದ್ರ ಸರ್ಕಾರದ ಕೈಗಾರಿಕೆಯನ್ನು ತರಲು ಪ್ರಾಮಾಣಿಕ ಪ್ರಯತ್ನ ಮಾಡುವ ಮೂಲಕ ಜಿಲ್ಲೆಯ ನಿರುದ್ಯೋಗಿ ಯುವಕರ ನೆರವಿಗೆ ಮುಂದಾಗಲಿ ಎಂದು ಚಲುವರಾಯಸ್ವಾಮಿ ಮನವಿ ಮಾಡಿದ್ದಾರೆ.

***********

ರಾಷ್ಟ್ರೀಯ ಹೆದ್ದಾರಿ ೪೮ರಲ್ಲಿ ಸಂಭವಿಸುತ್ತಿರುವ ರಸ್ತೆ ಅಪಘಾತಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ದಾವಣಗೆರೆ ಜಿಲ್ಲಾ ಪೊಲೀಸ್ ಇಲಾಖೆಯು ವಾಹನ ಸಂಚಾರ ಪಥ ಶಿಸ್ತು ಪಾಲನೆಯನ್ನು ಕಡ್ಡಾಯಗೊಳಿಸಿದೆ. ನಿಯಮ ಉಲ್ಲಂಘಿಸುವ ವಾಹನ ಸವಾರರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಎಚ್ಚರಿಕೆ ನೀಡಿದ್ದಾರೆ. ದಾವಣಗೆರೆ ಮೂಲಕ ಹಾದು ಹೋಗುವ 'ರಾಷ್ಟ್ರೀಯ ಹೆದ್ದಾರಿ ೪೮ರಲ್ಲಿ ಸಂಚರಿಸುವ ಭಾರೀ ವಾಹನಗಳು ನಿಗದಿಪಡಿಸಿದ ಪಥದಲ್ಲಿ ಸಾಗದಿರುವುದೇ ಅಪಘಾತಗಳಿಗೆ ಕಾರಣರಾಗುತ್ತಿದೆ. ಈ ನಿಯಮ ಉಲ್ಲಂಘಿಸುವ ವಾಹನ ಸವಾರರಿಗೆ ಮೊದಲ ಬಾರಿ ೫೦೦ ರೂಪಾಯಿ ಹಾಗೂ ಎರಡನೇ ಬಾರಿ ನಿಯಮ ಮೀರಿ ಸಂಚರಿಸಿದರೆ ಒಂದು ಸಾವಿರ ರೂಪಾಯಿ ದಂಡ ವಿಧಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

*****ಧ್ವನಿ**** ಉಮಾ ಪ್ರಶಾಂತ್

***********

ಹಿರಿಯ ಪತ್ರಕರ್ತ ಹಾಗು ವಿಧಾನ ಪರಿಷತ್ತಿನ ಮಾಜಿ ಸದಸ್ಯ ಪಿ. ರಾಮಯ್ಯ ಅವರು ಇಂದು ನಿಧನರಾಗಿದ್ದಾರೆ. ಅವರಿಗೆ ೯೩ ವರ್ಷ ವಯಸ್ಸಾಗಿತ್ತು. ಅವರು ದಿ ಹಿಂದು ಪತ್ರಿಕೆಯಲ್ಲಿ ಐದು ದಶಕಗಳಿಗೂ ಹೆಚ್ಚು ಕಾಲ ಸೇವೆ ಸಲ್ಲಿಸಿದ್ದರು.

ವಿಧಾನಪರಿಷತ್ ಸದಸ್ಯರಾಗಿಯೂ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಿದ್ದರು. ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಇಂದು ರಾಮಯ್ಯ ಅವರ ಪಾರ್ಥೀವ ಶರೀರದ ಅಂತಿಮ ದರ್ಶನ ಪಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕುಟುಂಬ ಸದಸ್ಯರಿಗೆ ಸಾಂತ್ವಾನ ಹೇಳಿದರು.

***********

ಚಿಕ್ಕಮಗಳೂರು ನಗರದ ಜಿಲ್ಲಾ ಆಟದ ಮೈದಾನದಲ್ಲಿ ಅತೀ ಹಿಂದುಳಿದ ಅರಣ್ಯಾಧಾರಿತ ಬುಡಕಟ್ಟು ವರ್ಗದವರಿಗೆ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಹೆಚ್.ಎಸ್ ಕೀರ್ತನಾ ತಿಳಿಸಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ವಿವಿಧ ಇಲಾಖೆಗಳ ವತಿಯಿಂದ ಇದೇ ೨೧ ಮತ್ತು ೨೨ ರಂದು ಬುಡಕಟ್ಟು ಜನಾಂಗಗಳಾದ ಮಲೆಕುಡಿಯರು, ಹಸಲರು, ಗೌಡಲು, ಹಕ್ಕಿಪಿಕ್ಕಿ ಹಾಗೂ ಡೋಂಗ್ರಿ ಗೆರಾಸಿಯಾ ಪಂಗಡಗಳಿಗೆ ಮಾತ್ರ ಅವಕಾಶ ಎಂದು ಅವರು ಮಾಹಿತಿ ನೀಡಿದ್ದಾರೆ.

***********

'ವಂದೇ ಮಾತರಂ' ಗೀತೆಯು ೧೫೦ ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಕೇಂದ್ರ ಕೈಗಾರಿಕಾ ಭದ್ರತಾ ಪಡೆ ಆಯೋಜಿಸಿರುವ 'ವಂದೇ ಮಾತರಂ ಕೋಸ್ಟಲ್ ಸೈಕ್ಲೋಥಾನ್-೨೦೨೬ ತಂಡ ಇದೇ ೧೬ಕ್ಕೆ ಕಾರವಾರಕ್ಕೆ ಆಗಮಿಸಲಿದೆ. ಸುಮಾರು ೫೦ ರಷ್ಟು ಮಹಿಳಾ ಸಿಬ್ಬಂದಿ ಸೇರಿದಂತೆ ಒಟ್ಟು ೧೨೦ ಸಿ.ಐ.ಎಸ್.ಎಫ್ ಸಿಬ್ಬಂದಿ ಒಳಗೊಂಡ ಪಶ್ಚಿಮ ಕರಾವಳಿ ಸೈಕ್ಲೋಥಾನ್ ತಂಡವು ಜನವರಿ ೨೮ ರಂದು ಗುಜರಾತ್‌ನ ಲಖ್‌ಪತ್ ಕೋಟೆಯಿಂದ ರ್‍ಯಾಲಿ ಪ್ರಾರಂಭಿಸಿದೆ. ಈ ರ್‍ಯಾಲಿ ಇದೇ ೧೫ರಂದು ಗೋವಾದ ಚಿಕಾಲಿಮ್ ಪಂಚಾಯತ್ ಭವನ ತಲುಪಲಿದೆ. ನಂತರ ಸೈಕ್ಲೋಥಾನ್ ತಂಡ ಇದೇ ೧೬ ರಂದು  ಮಡಗಾಂವ್ - ಕಾಣಕೋಣ - ಮಾಜಾಳಿ ಮೂಲಕ ಕಾರವಾರಕ್ಕೆ ಅಗಮಿಸಲಿದೆ.

***********

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳನ್ನು ಆದಷ್ಟು ಶೀಘ್ರ ಮುಗಿಸುವಂತೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ ಸಮೀರ್ ಶುಕ್ಲಾ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

*****END******